**ಸಾಕ್ಷಿಗೆ ದಿನಾಂಕ 10.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ**

1. ನಾನು ಈ ಪ್ರಕರಣದಲ್ಲಿ, ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ 5 | ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿ |
| ನಿ.ಪಿ 6 | ಪ್ರಥಮ ಹೇಳಿಕೆಯ ದೃಢೀಕೃತ ಪ್ರತಿ |
| ನಿ.ಪಿ 7 | ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿ |
| ನಿ.ಪಿ 8 | ಕಚ್ಚಾ ನಕಾಶೆಯ ದೃಢೀಕೃತ ಪ್ರತಿ |
| ನಿ.ಪಿ 9 | ಎಂ ವಿ ಐ ವರದಿಯ ದೃಢೀಕೃತ ಪ್ರತಿ |
| ನಿ.ಪಿ 10 | ಕಲಂ 133 ರಡಿ ನೀಡಿದ ನೋಟೀಸು ದೃಢೀಕೃತ ಪ್ರತಿ |
| ನಿ.ಪಿ 11 | ಕಲಂ 133 ರಡಿ ನೀಡಿದ ನೋಟೀಸಿಗೆ ಉತ್ತರ ದೃಢೀಕೃತ ಪ್ರತಿಸ್ಥಳ ಪಂಚನಾಮೆಯ ದೃಢೀಕೃತ ಪ್ರತಿ |
| ನಿ.ಪಿ 12 | ಗಾಯದ ಪ್ರಮಾಣಪತ್ರ ದೃಢೀಕೃತ ಪ್ರತಿ |
| ನಿ.ಪಿ 13 | ಪೊಲೀಸ್ ಇನ್ಟಿಮೇಷನ್ |

| | |
|---|---|
| ನಿ.ಪಿ 14 ರಿಂದ 16 | ಡಿಸ್ಚಾರ್ಜ್ ಸಮರಿ |
| ನಿ.ಪಿ 17 ರಿಂದ 20 | ಆಧಾರ್ ಕಾರ್ಡ್‌ನ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.). |
| ನಿ.ಪಿ 21 | ದೋಷಾರೋಪಣ ಪತ್ರದ ದೃಢೀಕೃತ ಪ್ರತಿ |
| ನಿ.ಪಿ 22 | ವಿವಾಹ ನೊಂದಣಿಪತ್ರದ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.). |
| ನಿ.ಪಿ 23 | ಉದ್ಯೋಗ ಗುರುತಿನ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.). |
| ನಿ.ಪಿ 24 ರಿಂದ 27 | ವೇತನ ಪತ್ರದ ಅಂತರ್ಜಾಲ ಪ್ರತಿಗಳು |
| ನಿ.ಪಿ 28 | ಆರ್ ಸಿ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.). |
| ನಿ.ಪಿ 29 | ಡಿ ಎಲ್ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.). |
| ನಿ.ಪಿ 30 ಮತ್ತು 31 | ಬ್ಯಾಂಕ್ ಸ್ಟೇಟ್ಮೆಂಟ್ ಅಂತರ್ಜಾಲ ಪ್ರತಿಗಳು |
| ನಿ.ಪಿ 32 | **ಭಾರತ ಸಾಕ್ಷ್ಯ ಅಧಿನಿಯಮ ಕಲಂ 65 ಬಿ ರ ಕೆಳಗೆ ಸಲ್ಲಿಸಲಾದ ಪ್ರಮಾಣಪತ್ರ** |
| ನಿ.ಪಿ 33 | 3 ವೈದ್ಯಕೀಯ ಬಿಲ್ಲುಗಳು ಒಟ್ಟು ಮೊತ್ತ ರೂ.13,97,727/- |
| ನಿ.ಪಿ 34 | 2 ಮುಂಗಡ ರಶೀದಿಗಳು |

| | |
|---|---|
| ನಿ.ಪಿ 35 | ನರ್ಸಿಂಗ್ ಸರ್ವಿಸ್ ಬಿಲ್ಲು ಮೊತ್ತ ರೂ.3,24,000/- |

3. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಪ್ರಕರಣದಲ್ಲಿ ಕೋರಿರುವ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಅರ್ಜಿದಾರರ ಪರ ವಕೀಲರು ಕಾಲವಕಾಶ ಕೋರಿರುತ್ತಾರೆ. ಆದುದರಿಂದ ಮುಂದುವರೆದ ಮುಖ್ಯವಿಚಾರಣೆಗೆ ಕಾಲಾವಕಾಶವನ್ನು ನೀಡಲಾಗಿರುತ್ತದೆ.**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**